**JUNE 26, 2026**

**AKASHAVANI - DHARWAD**

**PRADESH SAMACHARA (KANNADA) 12.00 P.M.**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ವಿಜಯಪುರ ಜಿಲ್ಲೆ, ಆಲಮೇಲ ಪಟ್ಟಣದಲ್ಲಿ** 145 ಕೋಟಿ ರೂಪಾಯಿ ಅನುದಾನದಲ್ಲಿ ತೋಟಗಾರಿಕೆ ಕಾಲೇಜು, 44 ಕೋಟಿ ರೂಪಾಯಿ ವೆಚ್ಚದ ಕಡಣಿ ಸೇತುವೆ, 3 ಕೋಟಿ ರೂಪಾಯಿ– ಸುಸಜ್ಜಿತ ಕ್ರೀಡಾಂಗಣ ಸೇರಿದಂತೆ, 25 ಕೋಟಿ ರೂಪಾಯಿ ಅನುದಾನದ ಆಲಮೇಲ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಲೋಕೋಪಯೋಗಿ ಖಾತೆ ಸಚಿವ ಸತೀಶ್ ಜಾರಕಿಹೊಳಿ ಚಾಲನೆ ನೀಡಿದರು. ಈ ಸಂದರ್ಭ ಮಾತನಾಡಿದ ಸಚಿವರು, ಶಾಸಕ ಅಶೋಕ ಮನಗೂಳಿಯವರ ಪ್ರಸ್ತಾವನೆ ಮೇರೆಗೆ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಅನುದಾನ ಮೀಸಲಿಟ್ಟು, ಕಾಮಗಾರಿಗಳಿಗೆ ಚಾಲನೆ ನೀಡಿರುವುದಾಗಿ ತಿಳಿಸಿದರು. ಕೈಗಾರಿಕೆ ಮತ್ತು ಮೂಲಸೌಕರ್ಯ ಅಭಿವೃದ್ಧಿ ಖಾತೆ ಸಚಿವ ಎಂ.ಬಿ ಪಾಟೀಲ್ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

<><><>

**ರಾಜ್ಯದ ಶಾಲಾ–ಕಾಲೇಜು ವಿದ್ಯಾರ್ಥಿಗಳಿಗೆ,** ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ, ರಾಜ್ಯದ ನಾಲ್ಕೂ ಸಾರಿಗೆ ಸಂಸ್ಥೆಗಳ ಬಸ್‌ಗಳಲ್ಲಿ ಪ್ರಯಾಣಿಸಲು, ಉಚಿತ ಬಸ್‌ಪಾಸ್ ವಿತರಿಸಲು, ರಾಜ್ಯ ಸರ್ಕಾರ ತೀರ್ಮಾನಿಸಿದೆ. ಈಗಾಗಲೇ ಶುಲ್ಕ ಪಾವತಿಸಿ, ಬಸ್‌ಪಾಸ್ ಪಡೆದಿರುವ ವಿದ್ಯಾರ್ಥಿಗಳು, ಸೇವಾ ಸಿಂಧು ಪೋರ್ಟಲ್‌ನಲ್ಲಿ ಸಂಪೂರ್ಣ ವಿವರ ದಾಖಲಿಸಿ, ತಮ್ಮ ಹಣವನ್ನು ಮರಳಿ ಪಡೆಯಬಹುದು ಎಂದು, ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ತಿಳಿಸಿದೆ.

<><><>

**ರಾಜ್ಯಾದ್ಯಂತ ಶಿಕ್ಷಕರು ಹಾಗೂ ವಿದ್ಯಾರ್ಥಿಗಳ** ಹಿತದೃಷ್ಟಿಯಿಂದ, ಶನಿವಾರದ ಶಾಲಾ ಸಮಯವನ್ನು ಬೆಳಗ್ಗೆ 8.30 ರಿಂದ ಮಧ್ಯಾಹ್ನ 12.30 ರ ವರೆಗೆ ನಿಗದಿಪಡಿಸಲಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆ ಆಯುಕ್ತ ವಿಕಾಸ್ ಕಿಶೋರ್ ಸುರಳ್ಕರ್ ತಿಳಿಸಿದ್ದಾರೆ.

<><><>

**“ಸಾಕ್ಷ್ಯವು ಸ್ಪಷ್ಟವಾಗಿದೆ: ತಡೆಗಟ್ಟುವಿಕೆಯಲ್ಲಿ ಹೂಡಿಕೆ ಮಾಡಿ”** ಎಂಬ, ವಿಷಯ ಆಧರಿಸಿ, ಇಂದು, ವಿಶ್ವ ಮಾದಕ ದ್ರವ್ಯಗಳ ದುರುಪಯೋಗ ಮತ್ತು ಅಕ್ರಮ ಸಾಗಣೆ ವಿರೋಧಿ ದಿನವನ್ನು ಆಚರಿಸಲಾಗುತ್ತಿದೆ. ಧಾರವಾಡದ ಮನೋ ಆರೋಗ್ಯ ಹಾಗೂ ನರವಿಜ್ಞಾನಗಳ ಸಂಸ್ಥೆ – ‘ಡಿಮ್ಹಾನ್ಸ್’ ಮನೋ ವೈದ್ಯಕೀಯ ಸಾಮಾಜಿಕ ಕಾರ್ಯಕರ್ತ, ಡಾಕ್ಟರ ಅಶೋಕ ಕೋರಿ, ಈ ದಿನದ ಮಹತ್ವದ ಕುರಿತು ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ.

<><><>

**ಡಾಕ್ಟರ ಅಶೋಕ ಕೋರಿ ಧ್ವನಿ– 39 ಸೆಕೆಂದುಗಳು**

<><><>

**ಯಾದಗಿರಿ ನಗರದಲ್ಲಿ, ವಿಶ್ವ ಮಾದಕ** ದ್ರವ್ಯಗಳ ದುರುಪಯೋಗ ಹಾಗೂ ಅಕ್ರಮ ಸಾಗಣೆ ವಿರೋಧಿ ದಿನದಂಗವಾಗಿ ಆಯೋಜಿತ, ಜಾಗೃತಿ ಪಾದಯಾತ್ರೆಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ ಚಾಲನೆ ನೀಡಿದರು.

<><><>

**ಇಂದು, ಮಹಾನ್ ಕವಿ, ರಾಷ್ಟ್ರೀಯ ಗೀತೆ** 'ವಂದೇ ಮಾತರಂ' ರಚಿಸಿದ, ಬಂಕಿಮ ಚಂದ್ರ ಚಟ್ಟೋಪಾಧ್ಯಾಯ ಅವರ ಜಯಂತಿ. ಕೇಂದ್ರ ಗೃಹ ಖಾತೆ ಸಚಿವರಾದ ಅಮಿತ್ ಶಾ, ಲೋಕಸಭಾ ಸಭಾಪತಿ ಓಂ ಬಿರ್ಲಾ ಸೇರಿದಂತೆ ಗಣ್ಯರು ಬಂಕಿಮರ ಸಾಹಿತ್ಯಿಕ ಕೊಡುಗೆಗಳನ್ನು ಸ್ಮರಿಸಿದ್ದು, ಶ್ರದ್ಧಾ ಸುಮನ ಅರ್ಪಿಸಿದ್ದಾರೆ.

<><><>

**ಧಾರವಾಡದ ರುಡ್‌ಸೆಟ್ ಸಂಸ್ಥೆಯಲ್ಲಿ,** ಬೆಳಗಾವಿ, ಹಾವೇರಿ, ಗದಗ, ಕೊಪ್ಪಳ, ಯಾದಗಿರಿ ಹಾಗೂ ವಿಜಯನಗರ ಜಿಲ್ಲೆಗಳ, 30 ಶಿಬಿರಾರ್ಥಿಗಳಿಗೆ, 30 ದಿನಗಳ ಟೇಲರಿಂಗ್ ಕೌಶಲ್ಯ ತರಬೇತಿ ಕಾರ್ಯಾಗಾರ, ನಡೆಯಿತು ಎಂದು, ರುಡ್‌ಸೆಟ್ ನಿರ್ದೇಶಕ, ಜಿ.ಪಿ. ಪೃಥ್ವಿರಾಜ ತಿಳಿಸಿದ್ದಾರೆ.

<><><>

**ಶಿಕ್ಷಣ ಇಲಾಖೆಯ,** ಗದಗ ಶಹರ ಸಂಪನ್ಮೂಲ ಕೇಂದ್ರದಲ್ಲಿ, ಪ್ರಾದೇಶಿಕ ಸಾರಿಗೆ ಇಲಾಖೆ ಅಧಿಕಾರಿ, ಅರುಣಕುಮಾರ ಕಟ್ಟೀಮನಿ, ಶಾಲಾ ವಾಹನಗಳ ಸುರಕ್ಷತೆ ಹಾಗೂ ಮಕ್ಕಳ ರಕ್ಷಣೆಗೆ ಸಂಬಂಧಿಸಿ, ಶಾಲಾ ವಾಹನಗಳ ಚಾಲಕರು ಮತ್ತು ನಿರ್ವಾಹಕರಿಗೆ, ಕಟ್ಟುನಿಟ್ಟಿನ ಸೂಚನೆ ನೀಡಿದರು.

<><><>

**ಉತ್ತರಕನ್ನಡ ಜಿಲ್ಲೆಯ,** ಎಲ್ಲ ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಗ್ರಾಮ ಪಂಚಾಯಿತಿಗಳಲ್ಲಿ, ಘನತ್ಯಾಜ್ಯ ನಿರ್ವಹಣಾ ನಿಯಮಗಳು–2026ನ್ನು ಪರಿಣಾಮಕಾರಿಯಾಗಿ, ಕಾಲಮಿತಿಯೊಳಗೆ ಅನುಷ್ಠಾನಗೊಳಿಸುವಂತೆ, ಅಪರ ಜಿಲ್ಲಾಧಿಕಾರಿ ಸಾಜೀದ್ ಮುಲ್ಲಾ, ಸೂಚಿಸಿದ್ದಾರೆ.

<><><>

**ನಾಡಿದ್ದು, ಜೂನ್ 28 ರಂದು, ಭಾನುವಾರ,** ರಾಜ್ಯಾದ್ಯಂತ ರಾಷ್ಟ್ರೀಯ ಪಲ್ಸ್ ಪೋಲಿಯೊ ಲಸಿಕಾ ಅಭಿಯಾನ ಜರುಗಲಿದೆ. ಐದು ವರ್ಷದೊಳಗಿನ ಎಲ್ಲ ಮಕ್ಕಳಿಗೆ ಪೋಲಿಯೊ ಲಸಿಕೆ ಹಾಕಿಸುವಂತೆ, ಕೋಲಾರ ಜಿಲ್ಲೆ, ಆರೋಗ್ಯಾಧಿಕಾರಿ ಡಾಕ್ಟರ್ ಜಿ. ಶ್ರೀನಿವಾಸ ಕೋರಿದ್ದಾರೆ.

<><><>

**ಆಕಾಶವಾಣಿಯ ಜನಪ್ರಿಯ ಮನ್ ಕಿ ಬಾತ್ ಸರಣಿಯ** 135 ನೇ ಆವೃತ್ತಿ, ನಾಡಿದ್ದು, ಭಾನುವಾರ ಬೆಳಗ್ಗೆ 11 ಗಂಟೆಗೆ ಪ್ರಸಾರವಾಗಲಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ದೇಶ, ವಿದೇಶಗಳಲ್ಲಿರುವ ಭಾರತೀಯರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ನಾಗರಿಕರು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಳ್ಳಲು ಇಂದು ಕೊನೆ ದಿನವಾಗಿದೆ. ಉಚಿತ ದೂರವಾಣಿ ಸಂಖ್ಯೆ– 1800–11–7800 ಗೆ ಕರೆ ಮಾಡಿ, ಅಭಿಪ್ರಾಯಗಳನ್ನು ಧ್ವನಿ ಮುದ್ರಿಸಬಹುದು.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ**

<><><>